# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ: 07-03-2022 ರಂದು ಸಮಯ 12.30 ಗಂಟೆಗೆ ವಾರ್ಡ್ ಸಂಖ್ಯೆ: 155 ಹನುಮಂತನಗರಕ್ಕೆ ಸಂಬಂಧಪಟ್ಟಂತೆ ಹರಿಹರಗುಡ್ಡ ಉದ್ಯಾನವನ (ತಿಮ್ಮೇಶಪ್ರಭು ಉದ್ಯಾನವನ)ದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು.**

1. ಶ್ರೀಮತಿ ಉಮಾದೇವಿ ಬಳಿಗಾರ್, ನೋಡಲ್ ಅಧಿಕಾರಿಗಳು – ಅಧ್ಯಕ್ಷರು
2. ಶ್ರೀ ಆನಂದ್.ಜಿ, ಸಹಾಯಕ ಅಭಿಯಂತರರು ವಾ.ನಂ.–155 – ಸದಸ್ಯ ಕಾರ್ಯದರ್ಶಿ
3. ಶ್ರೀ. ನಟರಾಜ್ (ಹಿ.ಆ.ಪ.) – ಸದಸ್ಯರು
4. ಶ್ರೀ.ರಾಮಚಂದ್ರ (ಕಿ.ಅ–155) ಬೆಸ್ಕಾಂ
5. ಶ್ರೀ ಪಿಳ್ಳಪ್ಪ – ಸಾರ್ವಜನಿಕರು.
6. ಶ್ರೀ ಉದಯ– ಸಾರ್ವಜನಿಕರು.
7. ಶಿ ಶ್ರೀಮತಿ ಆರ್.ಪದ್ಮ – ಸಾರ್ವಜನಿಕರು.

****

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ನಂ 155ರ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರು ತಿಳಿಸಿರುವ ಮೇರೆಗೆ ನೆರೆದಿದ್ದ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರನ್ನು / ಅಧಿಕಾರಿಗಳನ್ನು ಮತ್ತು ಸ್ಥಳೀಯ ಸಾರ್ವಜನಿಕರಿಗೆ ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ನೋಡಲ್ ಅಧಿಕಾರಿಗಳು ಮಾತನಾಡಿ ಹನುಮಂತನಗರ ವಾರ್ಡ್ ವ್ಯಾಪ್ತಿಯಲ್ಲಿರುವ ಬಿಡಾಡಿ ವಾಹನಗಳನ್ನು ತೆರವುಗೊಳಿಸಲು ಸುತ್ತಮುತ್ತಲಿನ ಸಾರ್ವಜನಿಕರು ಮನವಿಯನ್ನು ಮಾಡಿಕೊಂಡಿರುವುದರಿಂದ ಇದನ್ನು ತೆರವುಗೊಳಿಸಲು ಕ್ರಮವಹಿಸಲು ಸೂಚಿಸಿದರು.

ಕ್ರಮ: – ಸಹಾಯಕ ಅಭಿಯಂತರರು ವಾರ್ಡ್–155 ರವರಿಗೆ
ಕ್ರಮ ವಹಿಸಲು ಸೂಚಿಸಿರುತ್ತಾರೆ.

ನೋಡಲ್ ಅಧಿಕಾರಿಗಳು ಕಂದಾಯ ಪರಿವೀಕ್ಷಕರೊಂದಿಗೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬೇ–ಬಾಕಿ ಇರುವ ಸ್ವತ್ತುಗಳಿಗೆ ನೋಟೀಸ್ ಜಾರಿ ಮಾಡಿ ಕಂದಾಯ ವಸೂಲಿ ಮಾಡಲು ಕ್ರಮಕೈಗೊಳ್ಳಲು ತಿಳಿಸಿರುತ್ತಾರೆ.

ಕ್ರಮ: – ಕಂದಾಯ ಪರಿವೀಕ್ಷಕರು ವಾರ್ಡ್–155
ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.

>>>>2

Scanned by Scanner Go

ಹನುಮಂತನಗರ ವಾರ್ಡ್‌ನಲ್ಲಿ ಬರುವ ಗಂಗಾನದಿ ರಸ್ತೆ ಮತ್ತು ಜಿಂಕೆ ಪಾರ್ಕ್‌ನಲ್ಲಿ ವಿದ್ಯುತ್ ದೀಪ ಉರಿಯುತ್ತಿಲ್ಲ ವೆಂದು ಹಾಗೂ ಇದನ್ನು ಸರಿಪಡಿಸಿಕೊಳ್ಳಲು ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ಸಹಾಯಕ ಅಭಿಯಂತರರು ವಿದ್ಯುತ್ ವಿಭಾಗ(ದ) ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.

ಲಕ್ಷ್ಮೀಪುರ 1ನೇ ಅಡ್ಡರಸ್ತೆಯಲ್ಲಿ ಕಟ್ಟಡದ ತ್ಯಾಜ್ಯ ಕಸದ ರಾಶಿ ಹಾಗೂ ಅನುಪಯುಕ್ತ ವಸ್ತುಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ಸಹಾಯಕ ಅಭಿಯಂತರರು ವಾರ್ಡ್–155 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.

ವಾರ್ಡ್ ಕಮಿಟಿ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿ ವರ್ಗದವರಿಗೆ, ವಾರ್ಡ್ ಕಮಿಟಿ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ಪ್ರತಿ ತಿಂಗಳ ಮೊದಲನೆಯ ಮತ್ತು ಮೂರನೇ ಶನಿವಾರದಂದು ವಾರ್ಡ್ ಕಮಿಟಿ ಸಭೆಯನ್ನು ಏರ್ಪಡಿಸಲಾಗುವುದು ಎಂದು ತಿಳಿಸುತ್ತಾ, ವಂದನಾರ್ಪಣೆ ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

7/3/22

ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ–155 ಹನುಮಂತನಗರ

ಅಧ್ಯಕ್ಷರು ವಾರ್ಡ್ ಸಮಿತಿ
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ–155 ಹನುಮಂತನಗರ

ಪ್ರತಿಯನ್ನು:–

1. ಮಾನ್ಯ ಮುಖ್ಯ ಆಯುಕ್ತರು, ಬೃಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಹಣಕಾಸು) ಮತ್ತು ವಲಯ ಆಯುಕ್ತರು(ದ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
6. ಮಾನ್ಯ ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
7. ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
8. ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ಹನುಮಂತನಗರ ರವರ ಅವಗಾಹನೆಗೆ.
10. ಪೋಲೀಸ್ ಇನ್ಸ್‌ಪೆಕ್ಟರ್, ಕಾನೂನು ಸುವ್ಯವಸ್ಥೆ ಹನುಮಂತನಗರ/ಕೆಂಪೇಗೌಡನಗರ ಪೋಲೀಸ್ ಠಾಣೆ ರವರ ಅವಗಾಹನೆಗೆ.
11. ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಸಂಚಾರಿ ಪೋಲೀಸ್ ಠಾಣೆ ರವರ ಅವಗಾಹನೆಗೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
13. ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
14. ಕಛೇರಿ ಕಡತಕ್ಕೆ.

Scanned by Scanner Go